OS 157/2015 DW-3

ದಿನಾಂಕಃ **04-11-2024**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ ವಾದಿ ಪರ ಶ್ರೀ ಪಿ ಡಿ ಟಿ ವಕೀಲರಿಂದಃ

ದಾವಾ ಸ್ವತ್ತಿನ ಸರ್ವೇ ನಂ.ನನಗೆ ಗೊತ್ತಿರುವುದಿಲ್ಲ , ಆದರೆ 12 ಗುಂಟೆಗೆ ಸಂಬಂಧಿಸಿದಂತೆ ಇರುತ್ತದೆ. ಸದರಿ 12 ಗುಂಟೆಯ ಸರ್ವೇ ನಂ. ಹೇಳಲಾಗುವುದಿಲ್ಲ. ಸದರಿ 12 ಗುಂಟೆ ಜಮೀನಿನ ಚೆಕ್ಕುಬಂದಿ ಗೊತ್ತಿರುವುದಿಲ್ಲ. ಈ ದಾವೆಯನ್ನು ಯಾರು ಯಾರ ವಿರುದ್ಧ ಹೂಡಿರುತ್ತಾರೆ ಎಂದು ನಿಮಗೆ ಗೊತ್ತಿರುತ್ತದೆಯೇ ಎಂದು ಪ್ರಶ್ನಿಸಿದ್ದಕ್ಕೆ ಸಾಕ್ಷಿಯು ದೇವಸ್ಥಾನಕ್ಕೆ ಬೇಕಾಗಿರುತ್ತದೆ ಎಂದು ನಾವು ಬಂದಿರುತ್ತೇವೆ ಅಷ್ಟು ಮಾತ್ರ ನನಗೆ ಗೊತ್ತಿರುತ್ತದೆ ಎಂದು ಉತ್ತರಿಸಿರುತ್ತಾರೆ. ಅಟ್ಟಿ ಮಾರಮ್ಮ ದೇವಸ್ಥಾನಕ್ಕೆ ಬೇಕಾಗಿರುತ್ತದೆ ಎಂದು ಬಂದಿರುತ್ತೇವೆ. ಸದರಿ ದೇವಸ್ಥಾನ 30X40 ಅಡಿ ವಿಸ್ತೀರ್ಣದಲ್ಲಿ ಇರುತ್ತದೆ. ಸದರಿ ಸ್ವತ್ತಿನ ಖಾತೆ ನಂ. ಗೊತ್ತಿರುವುದಿಲ್ಲ. ದೇವಸ್ಥಾನ ಕಟ್ಟಿರುವ ಸ್ಥಳದ ಚೆಕ್ಕುಬಂದಿ ನನಗೆ ಗೊತ್ತಿರುವುದಿಲ್ಲ. ಸದರಿ ದೇವಸ್ಥಾನ ಊರಿನ ಉತ್ತರ ದಿಕ್ಕಿನಲ್ಲಿರುತ್ತದೆ.

ದಾವಾ ಸ್ವತ್ತನ್ನು ನೀವು ನೋಡಿರುತ್ತೀರಾ ಎಂದು ಪ್ರಶ್ನಿಸಿದ್ದಕ್ಕೆ ಸಾಕ್ಷಿಯು ನನಗೆ ಗೊತ್ತಿರುವುದಿಲ್ಲ ಎಂದು ಉತ್ತರಿಸಿರುತ್ತಾರೆ. ದಾವಾ ಸ್ವತ್ತಿನ ಬಗ್ಗೆ ಮತ್ತು ದಾವೆಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದು ಸೂಚಿಸುವುದು ಸರಿಯಲ್ಲ.
ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

(ಶ್ರೀ ಅಮರನಾಥ ಬಿ.ಎನ್)
ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಮ್.ಎಫ್.ಸಿ. ಮಧುಗಿರಿ